# ವೈದ್ಯರ ಕೊರತೆ ನೀಗಿಸಲು ನೇರ ನೇಮಕ: ಶ್ರೀರಾಮುಲು

**ವಿಧಾನಸಭೆ:** ರಾಜ್ಯದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರು ಹಾಗೂ ನರ್ಸ್ ಹುದ್ದೆಗಳಿಗೆ ನೇರ ನೇಮಕ ಮಾಡಿ ಆದಷ್ಟು ಶೀಘ್ರ ಭರ್ತಿ ಮಾಡಲಾಗುವುದು ಎಂದು ಆರೋಗ್ಯ ಸಚಿವ ಬಿ.ಶ್ರೀರಾಮುಲು ಹೇಳಿದ್ದಾರೆ.

> ವೈದ್ಯರ ಕೊರತೆಯಿಂದ ಜನಪ್ರತಿನಿಧಿಗಳು ಮುಜುಗರ ಅನುಭವಿಸುವ ಸ್ಥಿತಿ

ಜೆಡಿಎಸ್‌ನ ಎ.ಟಿ. ರಾಮಸ್ವಾಮಿ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದ ಎಲ್ಲ ಭಾಗಗಳಲ್ಲಿ ವೈದ್ಯರ ಸಮಸ್ಯೆ ಇದೆ. ಸರ್ಕಾರಿ ಆಸ್ಪತ್ರೆಗಳಲ್ಲಿರುವ ವೈದ್ಯರ ಕೊರತೆಯಿಂದ ಜನಪ್ರತಿನಿಧಿಗಳು ಮುಜುಗರ ಅನುಭವಿಸುವ ಸ್ಥಿತಿ ಇದೆ. ಈ ಸಮಸ್ಯೆಯನ್ನು ಶೀಘ್ರ ಪರಿಹರಿಸಬೇಕು ಎಂದು ಇಲಾಖೆಯ ಅಧಿಕಾರಿಗಳಿಗೆ ಹೇಳಿದ್ದೇನೆ. ನಾನೂ ಜಿಲ್ಲೆಗಳಿಗೆ ಭೇಟಿ ನೀಡಿದಾಗ ಸರ್ಕಾರಿ ಆಸ್ಪತ್ರೆಗಳಲ್ಲಿಯೇ ವಾಸ್ತವ್ಯ ಹೂಡಿ ಆಸ್ಪತ್ರೆಗಳಲ್ಲಿನ ಸಮಸ್ಯೆ ಹಾಗೂ ವೈದ್ಯರ ಸಮಸ್ಯೆ ಕುರಿತು ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳುತ್ತಿದ್ದೇನೆ ಎಂದರು.

ಸರ್ಕಾರಿ ಆಸ್ಪತ್ರೆಗಳಲ್ಲಿರುವ ವೈದ್ಯರ ಕೊರತೆಯನ್ನು ನೀಗಿಸುವ ಸಂಬಂಧ ಮತ್ತು ಹೊಸ ನೇಮಕಾತಿ ಸಂಬಂಧ ವಿವರವಾದ ವರದಿ ನೀಡುತ್ತೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವರದಿಗೆ ಸಾರ್ವಜನಿಕರ ಆಕ್ಷೇಪಣೆ ಸ್ವೀಕರಿಸಿ ಏಪ್ರಿಲ್ ಅಂತ್ಯದೊಳಗೆ ವೈದ್ಯರ ಕೊರತೆಯನ್ನು ಬಗೆ ಹರಿಸುತ್ತೇವೆ ಎಂದರು.

ಇದಕ್ಕೂ ಮೊದಲು, ಮಾತನಾಡಿದ ಶಿವಾನಂದ ಪಾಟೀಲ್, ಡಾ.ರಂಗನಾಥ್, ಪಿ.ಟಿ.ಪರಮೇಶ್ವರ್ ನಾಯ್ಕ್ ಅವರು, ಆರೋಗ್ಯ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಕೆಲಸ ಮಾಡುವ ವೈದ್ಯರ ಸಂಬಳದಲ್ಲಿ ಸಾಕಷ್ಟು ವ್ಯತ್ಯಾಸ ಇರುವುದರಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಹೆಚ್ಚಾಗುತ್ತಿದೆ. ವೇತನ ತಾರತಮ್ಯವನ್ನು ಸರಿಪಡಿಸಿದರೆ, ಗ್ರಾಮೀಣ ಪ್ರದೇಶದಲ್ಲಿಯೂ ಕೆಲಸ ಮಾಡಲು ವೈದ್ಯರು ದೊರೆಯುತ್ತಾರೆ ಎಂದು ಸಲಹೆ ನೀಡಿದರು.



ವಿಧಾನಸಭೆಯಲ್ಲಿ ಮಾತನಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ಬಿ.ಶ್ರೀರಾಮುಲು.

## ವೀರಶೈವ-ಲಿಂಗಾಯಿತ ಅಭಿವೃದ್ಧಿ ನಿಗಮ ಸ್ಥಾಪನೆಗೆ ಶಾಸಕರ ಆಗ್ರಹ

**ವಿಧಾನಸಭೆ:** ವೀರಶೈವ-ಲಿಂಗಾಯಿತ ಸಮುದಾಯಕ್ಕೆ ಪ್ರತ್ಯೇಕ ಅಭಿವೃದ್ಧಿ ನಿಗಮ ಸ್ಥಾಪಿಸುವಂತೆ ಸಮುದಾಯದ ಶಾಸಕರು ಪಕ್ಷ ಬೇಧ ಮರೆತು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಶಾಸಕ ಯಶವಂತರಾಯ ಗೌಡ ಪಾಟೀಲ ವಿಷಯ ಪ್ರಸ್ತಾಪಿಸಿ, ಪ್ರತ್ಯೇಕ ವೀರಶೈವ-ಲಿಂಗಾಯಿತ ಅಭಿವೃದ್ಧಿ ನಿಗಮ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು. ಇದಕ್ಕೆ ಎಂ.ಪಿ.ರೇಣುಕಾಚಾರ್ಯ, ಈಶ್ವರ್ ಖಂಡ್ರೆ, ಲಕ್ಷ್ಮೀ ಹೆಬ್ಬಾಳ್ಕರ್, ವೆಂಕಟರಾವ್ ನಾಡಗೌಡ, ಮಾಡಾಳು ವಿರೂಪಾಕ್ಷಪ್ಪ ಮತ್ತಿತರ ಶಾಸಕರು ಧ್ವನಿಗೂಡಿಸಿದರು.

ಇದಕ್ಕೆ ಉತ್ತರಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಬಿ.ಶ್ರೀರಾಮುಲು, ವೀರಶೈವ-ಲಿಂಗಾಯಿತ ಅಭಿವೃದ್ಧಿ ನಿಗಮ ಸ್ಥಾಪಿಸುವ ಬಗ್ಗೆ ಮುಖ್ಯಮಂತ್ರಿ ಆಸಕ್ತಿ ಹೊಂದಿದ್ದಾರೆ. ಪ್ರಸಕ್ತ ಅಧಿವೇಶನ ಮುಗಿಯುವುದರೊಳಗೆ ಸಂಬಂಧಪಟ್ಟವರೊಂದಿಗೆ ಸಭೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಪ್ರವರ್ಗ-1 ಮತ್ತು 2ಎ ಗೆ ಶೇ.70ರಷ್ಟು, ಪ್ರವರ್ಗ 3ಎ ಮತ್ತು 3ಬಿ ಗೆ ಶೇ.30ರಷ್ಟು ಮೀಸಲಾತಿ ಸೌಲಭ್ಯ ಒದಗಿಸಲಾಗುತ್ತಿದೆ. 2019-20ನೇ ಸಾಲಿನಲ್ಲಿ ಜನವರಿ ಅಂತ್ಯಕ್ಕೆ 2,727 ವೀರಶೈವ-ಲಿಂಗಾಯಿತ ಜನಾಂಗದವರಿಗೆ 16.80 ಕೋಟಿ ರೂ. ಸಾಲ ಮತ್ತು ಸಹಾಯಧನ ಒದಗಿಸಲಾಗಿದೆ ಎಂದರು.

ಈ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ದೇವರಾಜ ಅರಸು ನಿಗಮದಿಂದ ಫಲಾನುಭವಿಗಳಾಗಲು ಅವಕಾಶ ದೊರೆಯುತ್ತಿಲ್ಲ ಎಂಬ ಆರೋಪ ಇದೆ. ಈ ಕುರಿತು ಶೀಘ್ರವೇ ಸಭೆ ಕರೆದು ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಈ ಸಂದರ್ಭದಲ್ಲಿ ಯಶವಂತರಾಯ ಗೌಡ ಪಾಟೀಲ್ ಅವರು, ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿಯೇ ಸಭೆ ಕರೆಯಬೇಕು ಎಂದು ಆಗ್ರಹಿಸಿದರು.

ಇದಕ್ಕೂ ಮುನ್ನ ಮಾತನಾಡಿದ ಜೆಡಿಎಸ್‌ನ ಅನ್ನದಾನಿ, ಹಿಂದುಳಿದ ವರ್ಗದಲ್ಲಿ ಸಾವಿರಾರು ಜಾತಿಗಳು ಬರುವುದರಿಂದ ದೇವರಾಜ್ ಅರಸು ಅಭಿವೃದ್ಧಿ ನಿಗಮಕ್ಕೆ ಒಂದು ಸಾವಿರ ಕೋಟಿ ರೂ.ಅನುದಾನ ಒದಗಿಸಬೇಕು. ಎಸ್ಸಿ/ಎಸ್ಟಿ ಹಾಗೂ ಅಲ್ಪಸಂಖ್ಯಾತ ನಿಗಮಗಳಿಗೆ ಸಾವಿರಾರು ಕೋಟಿ ರೂ.ನೀಡಲಾಗಿದೆ ಎಂದು ಹೇಳಿದರು.